**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

=======================================================

ಸಂ: ಸಿ4[4] /ಪ್ರೌ.ಶಿ./ವಿ.ಶೈ.ದಾ.ತಿದ್ದುಪಡಿ/56/2018-19 ದಿನಾಂಕ: 23.02.2019

**: : ಜ್ಞಾಪನ : :**

ವಿಷಯ: ವಿದ್ಯಾರ್ಥಿಗಳ ಶೈಕ್ಷಣಿಕ ದಾಖಲೆಗಳ ತಿದ್ದುಪಡಿ ಸಂಬಂಧ ನ್ಯಾಯಾಲಯಗಳ ಡಿಕ್ರಿ ಆದೇಶದ ಅನುಷ್ಠಾನದ ಬಗ್ಗೆ.

ಉಲ್ಲೇಖ:
1. ಜೆ.ಎಂ.ಸಿ.ನ್ಯಾಯಾಲಯ, ಭಟ್ಕಳರವರ ಕಾರಣ ಕೇಳುವ ನೋಟೀಸ್ ದಿನಾಂಕ: 04.02.2019.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 100 ಡಿಟಿಬಿ 2014 ದಿನಾಂಕ: 26.10.2015.
3. ಈ ಕಛೇರಿ ಪತ್ರ ಸಂಖ್ಯೆ: ಸಿ4(6)ಜಾತಿ/ಹೆಸರು/ಜನ್ಮದಿನಾಂಕ ತಿದ್ದುಪಡಿ 05/2014-15 ದಿನಾಂಕ:29.10.2015

**********

ಶ್ರೀ ಗಣಪಯ್ಯ ಮಸ್ತಿ ಗೊಂಡ, ಮರುಕೇರಿ, ಭಟ್ಕಳ, ಉತ್ತರ ಕನ್ನಡ ಜಿಲ್ಲೆ ರವರ ಪ್ರಕರಣ ಸಂಖ್ಯೆ: ಆರ್.ಎ.107/2013ಕ್ಕೆ ಸಂಬಂಧಿಸಿದಂತೆ ಭಟ್ಕಳ ಜೆ.ಎಂ.ಎಫ್.ಸಿ.ನ್ಯಾಯಾಲಯವು ದಿನಾಂಕ:13.12.2017ರಲ್ಲಿ ತೀರ್ಪು ನೀಡಿರುತ್ತದೆ. ಸದರಿ ನ್ಯಾಯಾಲಯದ ಡಿಕ್ರಿ ಆದೇಶವನ್ನು ಅನುಷ್ಠಾನಗೊಳಿಸದಿರುವ ಬಗ್ಗೆ ಉಲ್ಲೇಖಿತ ಪತ್ರದಲ್ಲಿ ಖುದ್ದು ನ್ಯಾಯಾಲಯಕ್ಕೆ ಹಾಜರಾಗಿ ವಿಳಂಬಕ್ಕೆ ಕಾರಣಸಹಿತ ಹೇಳಿಕೆ ಸಲ್ಲಿಸುವಂತೆ ಮಾನ್ಯ ಆಯುಕ್ತರಿಗೆ ಕಾರಣ ಕೇಳುವ ನೋಟೀಸ್ ಜಾರಿಯಾಗಿರುತ್ತದೆ.

ವಿದ್ಯಾರ್ಥಿಗಳ ಶಾಲಾ ದಾಖಲೆಗಳಲ್ಲಿ ವಿದ್ಯಾರ್ಥಿಯ ಹೆಸರು/ಪೋಷಕರ ಹೆಸರು, ಜನ್ಮದಿನಾಂಕ, ಜಾತಿ ಇತ್ಯಾದಿ ತಿದ್ದುಪಡಿ ಸಂಬಂಧ ದಾಖಲಾಗುವ ನ್ಯಾಯಾಲಯ ಪ್ರಕರಣಗಳಲ್ಲಿ ಸರ್ಕಾರದ ಮುಖ್ಯಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿ(ಪ್ರಾಥಮಿಕ) ಮತ್ತು (ಪ್ರೌಢ), ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳನ್ನು 1 ಮತ್ತು 2ನೇ ಪ್ರತಿವಾದಿಗಳನ್ನಾಗಿ ಮಾಡಲಾಗುತ್ತಿದೆ. ಇಂತಹ ಪ್ರಕರಣಗಳಲ್ಲಿ ಸಂಬಂಧಿಸಿದ ನ್ಯಾಯಾಲಯಗಳ ಡಿಕ್ರಿ ಆದೇಶ ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸುವ ಕುರಿತು ಸೂಕ್ತ ಕ್ರಮವಹಿಸುವಂತೆ ತಿಳಿಸಲಾಗಿದೆ ಮತ್ತು ಸದರಿ ನ್ಯಾಯಾಲಯಗಳ ಡಿಕ್ರಿ ಆದೇಶಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸದೆ, ನ್ಯಾಯಾಲಯಗಳಿಂದ ಮೇಲಾಧಿಕಾರಿಗಳಿಗೆ ವೈಯಕ್ತಿಕ ಹಾಜರಾತಿಗೆ ಆದೇಶ, ನಿಂದನಾ ದಾವೆ ದಾಖಲು ಇತ್ಯಾದಿ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರುಗಳನ್ನೇ ವೈಯಕ್ತಿಕವಾಗಿ ಹೊಣೆಗರರನ್ನಾಗಿ ಮಾಡಲಾಗುತ್ತದೆ ಎಂದು ಉಲ್ಲೇಖ(2)ರ ಸರ್ಕಾರದ ಸುತ್ತೋಲೆಯಲ್ಲಿ ಈಗಾಗಲೇ ನಿರ್ದೇಶಿಸಲಾಗಿದೆ.

ಆದರೂ, ಉಲ್ಲೇಖ(1)ರಲ್ಲಿ ವೈಯಕ್ತಿಕ ಹಾಜರಾತಿಗೆ ನ್ಯಾಯಾಲಯವು ಆದೇಶ ನೀಡಿರುವುದನ್ನು ಮಾನ್ಯ ಆಯುಕ್ತರು ಗಂಭೀರವಾಗಿ ಪರಿಗಣಿಸಿರುತ್ತಾರೆ. ಇಂತಹ ಪ್ರಕರಣಗಳಲ್ಲಿ ಉದಾಸೀನ ಮನೋಭಾವ ತಳೆಯದೆ ವೈಯಕ್ತಿಕ ಗಮನಹರಿಸಿ ನ್ಯಾಯಾಲಯದ ಡಿಕ್ರಿ ಆದೇಶಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸುವಂತೆಯೂ ಹಾಗೂ ಮೇಲಾಧಿಕಾರಿಗಳಿಗೆ ವೈಯಕ್ತಿಕ ಹಾಜರಾತಿಗೆ ಆದೇಶ, ನಿಂದನಾ ದಾವೆ ದಾಖಲು ಇತ್ಯಾದಿ ಪ್ರಕರಣಗಳಿಗೆ ಆಸ್ಪದ ನೀಡದೆ ಸೂಕ್ತ ಕ್ರಮವಹಿಸುವಂತೆ ತಿಳಿಸಿದೆ.

ಇನ್ನು ಮುಂದೆ ಉಪನಿರ್ದೇಶಕರು/ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ನ್ಯಾಯಾಲಯದ ತೀರ್ಪನ್ನು ಸಕಾಲದಲ್ಲಿ ಅನುಷ್ಠಾನಗೊಳಿಸದೆ ಆಯುಕ್ತರಿಗಾಗಲೀ ಅಥವಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗಾಗಲೀ ನೋಟೀಸು ಜಾರಿಯಾದಲ್ಲಿ ಸಂಬಂಧಪಟ್ಟ ಎಲ್ಲಾ ಅಧಿಕಾರಿ/ಸಿಬ್ಬಂದಿ ಮೇಲೆ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಡತೆ ನಿಯಮಗಳಡಿ 1–4 ದೋಷಾರೋಪಣಪಟ್ಟಿ ಜಾರಿಗೊಳಿಸಿ ಶಿಸ್ತುಕ್ರಮ ಜರುಗಿಸಲಾಗುವುದೆಂದು ಎಚ್ಚರಿಕೆ ನೀಡಲಾಗಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ(ಸಂಬಂಧಿಸಿದ ಉಪನಿರ್ದೇಶಕರ ಮುಖಾಂತರ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಅಪರ ಆಯುಕ್ತರು, ಧಾರವಾಡ/ಕಲಬುರಗಿ ಆಯುಕ್ತಾಲಯ, ಧಾರವಾಡ/ಕಲಬುರಗಿ.
2. ಕಛೇರಿ ಪ್ರತಿ.